# ಕರ್ನಾಟಕ ಸರ್ಕಾರ

ಸಿಐ 37 ಆರ್‌ಐಎಸ್ 2025

ಕರ್ನಾಟಕ ಸರ್ಕಾರ ಸಚಿವಾಲಯ,
ವಿಕಾಸ ಸೌಧ,
ಬೆಂಗಳೂರು, ದಿನಾಂಕ: 15.02.2025

## ಸುತ್ತೋಲೆ

**ವಿಷಯ:** ಕರ್ನಾಟಕ ರಾಜ್ಯದ ಸರ್ಕಾರಿ ಹಾಗೂ ಖಾಸಗಿ ಕ್ಷೇತ್ರದಲ್ಲಿ ತಯಾರಾಗುವ ಉತ್ಪನ್ನಗಳ ಮೇಲೆ ಕನ್ನಡದಲ್ಲಿ ಹೆಸರನ್ನು ಮುದ್ರಿಸುವ ಬಗ್ಗೆ.

****

ಭಾಷೆಯು ನೆಲದ ಸಂಸ್ಕೃತಿ, ಸಂಪ್ರದಾಯ ಮತ್ತು ಮೌಲ್ಯಗಳನ್ನು ಪ್ರತಿಬಿಂಬಿಸುತ್ತದೆ. ಒಂದು ಭಾಷೆ ಬೆಳವಣಿಗೆಯಾಗಬೇಕಾದರೆ ಆ ನೆಲದಲ್ಲಿನ ಉತ್ಪಾದನೆ, ಮಾರುಕಟ್ಟೆ, ವ್ಯವಹಾರಗಳು ಸ್ಥಳೀಯ ಭಾಷೆಯಲ್ಲಿರಬೇಕು. ಕನ್ನಡ ಭಾಷೆಯ ಸಮಗ್ರ ಅಭಿವೃದ್ಧಿಗಾಗಿ ಮತ್ತು ಕನ್ನಡಿಗರಿಗೆ ಜೀವನದ ಎಲ್ಲಾ ಕ್ಷೇತ್ರಗಳಲ್ಲಿ ಉತ್ತಮ ಅವಕಾಶಗಳನ್ನು ಕಲ್ಪಿಸುವ ಉದ್ದೇಶದಿಂದ ಸರ್ಕಾರವು ಕನ್ನಡ ಭಾಷಾ ಸಮಗ್ರ ಅಭಿವೃದ್ಧಿ ಅಧಿನಿಯಮ, 2022ನ್ನು ದಿನಾಂಕ: 12.03.2024 ರಿಂದ ಜಾರಿಗೆ ತಂದಿರುತ್ತದೆ. ಸದರಿ ಅಧಿನಿಯಮದ ಕಲಂ 17 (7)ರಲ್ಲಿ ಸಾಧ್ಯವಾದಷ್ಟು ಮಟ್ಟಿಗೆ ರಾಜ್ಯದೊಳಗೆ ತಯಾರಿಸಿದ ಮತ್ತು ಮಾರಾಟವಾಗುವ ಎಲ್ಲಾ ಕೈಗಾರಿಕಾ ಮತ್ತು ಇತರೆ ಗ್ರಾಹಕ ಉತ್ಪನ್ನಗಳ ಹೆಸರು ಮತ್ತು ಅವುಗಳ ಬಳಕೆಯ ಕುರಿತಾದ ನಿರ್ದೇಶನಗಳು ಯಾವುದಾದರೂ ಇದ್ದಲ್ಲಿ ಯಾವುದೇ ಇತರ ಭಾಷೆಯ ಜೊತೆಗೆ ಕನ್ನಡದಲ್ಲಿ ಇರತಕ್ಕದ್ದೆಂದು ತಿಳಿಸಲಾಗಿದೆ.

ಈ ನಿಟ್ಟಿನಲ್ಲಿ ರಾಜ್ಯದಲ್ಲಿ ಸರ್ಕಾರಿ ಹಾಗೂ ಖಾಸಗಿ ಕ್ಷೇತ್ರದಲ್ಲಿ ತಯಾರಾಗುವ ಎಲ್ಲಾ ಕೈಗಾರಿಕೆ ಮತ್ತು ಗ್ರಾಹಕ ಉತ್ಪನ್ನಗಳ ಮೇಲೆ ಹೆಸರು ಮತ್ತು ಅವುಗಳ ಬಳಕೆಯ ಕುರಿತಾದ ನಿರ್ದೇಶನಗಳನ್ನು ಇತರ ಭಾಷೆಗಳ ಜೊತೆಗೆ ಕನ್ನಡದಲ್ಲಿಯೂ ಕಡ್ಡಾಯವಾಗಿ ಮುದ್ರಿಸುವಂತೆ ಈ ಮೂಲಕ ಸೂಚಿಸಲಾಗಿದೆ ಹಾಗೂ ಕನ್ನಡ ಭಾಷಾ ಸಮಗ್ರ ಅಭಿವೃದ್ಧಿ ಅಧಿನಿಯಮ, 2022ರ ಕಲಂ 9ರಡಿ ಗೊತ್ತುಪಡಿಸಿದ ಜಾರಿ ಪ್ರಾಧಿಕಾರಗಳು ಈ ಸೂಚನೆಗಳನ್ನು ಸರ್ಕಾರಿ ಮತ್ತು ಖಾಸಗಿ ಕ್ಷೇತ್ರದ ಎಲ್ಲಾ ಕೈಗಾರಿಕಾ ಮತ್ತು ಗ್ರಾಹಕ ವಸ್ತುಗಳ ಉತ್ಪನ್ನದಾರರು ಕಟ್ಟು ನಿಟ್ಟಾಗಿ ಅನುಷ್ಠಾನಗೊಳಿಸುವ ಬಗ್ಗೆ ಮೇಲ್ವಿಚಾರಣೆಯನ್ನು ಮಾಡುವಂತೆ ಸೂಚಿಸಲಾಗಿದೆ.

ಉಮಾದೇವಿ ಕೆ. 15/02/25
**(ಉಮಾದೇವಿ ಕೆ.)**
ಸರ್ಕಾರದ ಅಧೀನ ಕಾರ್ಯದರ್ಶಿ,
ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ,
(ಸೇವೆಗಳು & ಸಮನ್ವಯ)
15/2

**ಇವರಿಗೆ:**

1. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿ / ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿಗಳು.
2. ಎಲ್ಲಾ ಜಿಲ್ಲಾಧಿಕಾರಿಗಳು.
3. ಎಲ್ಲಾ ಮಹಾನಗರ ಪಾಲಿಕೆ ಆಯುಕ್ತರುಗಳು.
4. ಎಲ್ಲಾ ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು.
5. ಕೈಗಾರಿಕಾಭಿವೃದ್ಧಿ ಆಯುಕ್ತರು, ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ, ಬೆಂಗಳೂರು.
6. ನಿರ್ದೇಶಕರು, MSME, ಬೆಂಗಳೂರು.
7. ಹೆಚ್ಚುವರಿ ಪ್ರತಿ / ರಕ್ಷಾ ಕಡತ.

...2

**ಪ್ರತಿ ಮಾಹಿತಿಗಾಗಿ:**

1. ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
2. ಮಾನ್ಯ ಸಣ್ಣ ಕೈಗಾರಿಕೆ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
3. ಮಾನ್ಯ ಮುಖ್ಯಮಂತ್ರಿಗಳ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
4. ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
5. ಸರ್ಕಾರದ ಅಧೀನ ಕಾರ್ಯದರ್ಶಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ (ಆಡಳಿತ ಕನ್ನಡ).
6. ಸರ್ಕಾರದ ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ.